Akashvani : Bangalore
National Bulletin In Kannada
12.10.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
12.10.2024 : 7.35AM
*******

ಮುಖ್ಯಾಂಶಗಳು

1. ದೇಶಾದ್ಯಂತ ಇಂದು ದಸರಾ ಆಚರಣೆ; ಮೈಸೂರಿನಲ್ಲಿ ವೈಭವದ ಜಂಬೂಸವಾರಿ.
2. ಪ್ರಧಾನಮಂತ್ರಿ ಸೂರ್ಯಘರ್ - ಉಚಿತ ವಿದ್ಯುತ್ ಯೋಜನೆಗೆ ಮಾರ್ಗಸೂಚಿ ಪ್ರಕಟ.
3. ಇಂದು ವಿಶ್ವ ಸಂಧಿವಾತ ದಿನ; ಸ್ವಯಂ ಚಿಕಿತ್ಸೆ ಅಪಾಯಕಾರಿ - ತಜ್ಞರ ಎಚ್ಚರಿಕೆ
4. ಚೆನ್ನೈನ ಗುಡ್ಡೂರು ಬಳಿ ಅಪಘಾತಕ್ಕೀಡಾದ ಮೈಸೂರು-ದರ್ಬಾಂಗ ಎಕ್ಸ್‌ಪ್ರೆಸ್ ರೈಲು; ಗಾಯಗೊಂಡವರಿಗೆ ಸೂಕ್ತ ಚಿಕಿತ್ಸೆ
5. ಕ್ರಿಕೆಟ್; ಭಾರತಾ-ಬಾಂಗ್ಲಾ ನಡುವೆ ೩ನೇ ಹಾಗೂ ಅಂತಿಮ ಟಿ-೨೦ ಪಂದ್ಯ ಇಂದು.

*********

ಇಂದು ವಿಜಯ ದಶಮಿ ಅಥವಾ ದಸರಾವನ್ನು ಅತ್ಯಂತ ವಿಜೃಂಭಣೆಯಿಂದ ದೇಶಾದ್ಯಂತ ಆಚರಿಸಲಾಗುತ್ತಿದೆ. ಭಗವಾನ್ ರಾಮ ರಾವಣನ ವಿರುದ್ಧ ಗೆಲುವು ಸಾಧಿಸಿದ ಸಂಕೇತವಾಗಿ ದುಷ್ಟರ ವಿರುದ್ಧ ಶಿಷ್ಟರ ವಿಜಯ ಎಂಬ ಧ್ಯೇಯದಡಿ ಹಬ್ಬವನ್ನು ಆಚರಿಸುವುದು ವಾಡಿಕೆಯಾಗಿದೆ. ವಿಜಯದಶಮಿ ನವರಾತ್ರಿ ಮತ್ತು ದುರ್ಗಾ ಪೂಜೆಯ ನಿರ್ಣಾಯಕ ಘಟ್ಟವಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವಿಜಯ ದಶಮಿಗೆ ಸಂದೇಶ ನೀಡಿ, ಹಬ್ಬ ಅನ್ಯಾಯದ ವಿರುದ್ಧ ನ್ಯಾಯದ ಗೆಲುವನ್ನು ಸೂಚಿಸುತ್ತದೆ. ಘನತೆ, ಕರ್ತವ್ಯ ಬದ್ಧತೆ, ಶುದ್ಧತೆ, ನಮ್ರತೆ ಮತ್ತು ನ್ಯಾಯಕ್ಕಾಗಿ ಧೈರ್ಯದ ಹೋರಾಟದ ಅನೇಕ ಸ್ಪೂರ್ತಿದಾಯಕ ಕಥೆಗಳು ಈ ಹಬ್ಬದೊಂದಿಗೆ ಸಂಬಂಧ ಹೊಂದಿವೆ ಎಂದು ಹೇಳಿದ್ದಾರೆ. ನಂಬಿಕೆ ಮತ್ತು ಉತ್ಸಾಹದ ಈ ಹಬ್ಬ ಎಲ್ಲರಿಗೂ ಯಶಸ್ಸು, ಸಮೃದ್ಧಿ ಮತ್ತು ಸಂತೋಷ ತರಲಿ ಎಂದು ರಾಷ್ಟ್ರಪತಿಯವರು ಆಶಯ ವ್ಯಕ್ತಪಡಿಸಿದ್ದಾರೆ.

*********

ಸುಪ್ರಸಿದ್ಧ ಮೈಸೂರು ದಸರಾ ಮಹೋತ್ಸವ ಅಂತಿಮ ಘಟ್ಟದಲ್ಲಿದೆ. ಇಂದು ಜಂಬೂ ಸವಾರಿ ಜೊತೆಗೆ ಇಡೀ ದಸರಾ ಮಹೋತ್ಸವಕ್ಕೆ ಅತ್ಯಂತ ಮಹತ್ವದ ದಿನ. ಪೂರ್ವ ತಯಾರಿ ಈಗಾಗಲೇ ಪೂರ್ಣಗೊಂಡಿದೆ. ಚಿನ್ನದ ಅಂಬಾರಿ ಹೊರಲು ಅಭಿಮನ್ಯು ಸರ್ವ ಸನ್ನದ್ಧನಾಗಿದ್ದಾನೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ನಿನ್ನೆ ಅಂತಿಮ ತಾಲೀಮಿನ ಬಳಿಕ ಅಭಿಮನ್ಯು ಸೇರಿದಂತೆ ಎಲ್ಲಾ ಹದಿನಾಲ್ಕು ಆನೆಗಳಿಗೆ ಪೂಜೆ ಸಲ್ಲಿಸಿದರು. ಈ ವೇಳೆ ಆನೆಗಳ ಜೊತೆಗೆ ಸಿಬ್ಬಂದಿ, ಕಾವಾಡಿಗರೂ ಭಾಗಿಯಾದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಹಿರಿಯ ಅರಣ್ಯ ಅಧಿಕಾರಿ

ಡಾ.ಐ.ಬಿ.ಪ್ರಭುಗೌಡ, ಜಂಬೂಸವಾರಿ ಪೂರ್ವದ ತಾಲೀಮುಗಳು ಪೂರ್ಣವಾಗಿವೆ. ಅಭಿಮನ್ಯು ಸೇರಿದಂತೆ ಎಲ್ಲಾ ಆನೆಗಳ ಆರೋಗ್ಯ ಉತ್ತಮವಾಗಿದೆ ಎಂದು ಮಾಹಿತಿ ನೀಡಿದರು. ಜಂಬೂಸವಾರಿ ಮೆರವಣಿಗೆಯಲ್ಲಿ ಒಂಬತ್ತು ಆನೆಗಳು ಭಾಗಿಯಾಗಲಿದ್ದು, ಅಭಿಮನ್ಯು ಚಿನ್ನದ ಅಂಬಾರಿ ಹೊತ್ತು ಸಾಗಲಿದ್ದಾನೆ. ಅಭಿಮನ್ಯುವಿನ ಎಡಬಲದಲ್ಲಿ ಹಿರಣ್ಯ ಹಾಗು ಲಕ್ಷ್ಮಿ ಕುಮ್ಕಿ ಆನೆಗಳಾಗಿ ಸಾಗಲಿವೆ. ಧನಂಜಯ ನಿಶಾನೆ ಆನೆಯಾಗಿ, ಗೋಪಿ ನೌಪತ್ತು ಆನೆಯಾಗಿ ಸಾಗಲಿದ್ದಾನೆ ಮತ್ತು ಉಳಿದ ನಾಲ್ಕು ಆನೆಗಳು ಸಾಲಾನೆಗಳಾಗಿ ಸಂಚರಿಸಲಿವೆ. ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಮಾತನಾಡಿ, ಈ ಬಾರಿಯ ದಸರಾ ಮಹೋತ್ಸವಕ್ಕೆ ಎರಡು ಹಂತದ ಭದ್ರತೆ ಕೈಗೊಳ್ಳಲಾಗಿದೆ ಹಾಗೂ ಜಂಬೂಸವಾರಿ ಮೆರವಣಿಗೆ ಸಾಗುವ ಮಾರ್ಗದಲ್ಲಿ ವ್ಯಾಪಕ ಬಂದೋಬಸ್ತ್ ಕಲ್ಪಿಸಲಾಗುವುದು. ಮೈಸೂರು ಜಿಲ್ಲೆ ಮಾತ್ರದವಲ್ಲದೇ ರಾಜ್ಯದ ವಿವಿಧೆಡೆಗಳಿಂದ ಆಗಮಿಸಿರುವ ನಾಲ್ಕು ಸಾವಿರಕ್ಕೂ ಹೆಚ್ಚು ಪೊಲೀಸರು ಭದ್ರತಾ ಕರ್ತವ್ಯದಲ್ಲಿ ನಿರತರಾಗಿದ್ದಾರೆ ಎಂದರು.

*********

ಮಹಾರಾಷ್ಟ್ರದ ನಾಗ್ಪುರದ ರೇಶಿಂಬಾಗ್ ಮೈದಾನದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ 'ವಿಜಯದಶಮಿ' ಕಾರ್ಯಕ್ರಮಕ್ಕೆ ವ್ಯಾಪಕ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ಮಾಜಿ ಅಧ್ಯಕ್ಷ ಕೆ. ರಾಧಾಕೃಷ್ಣನ್ ಅವರು ಇಂದು ಬೆಳಗ್ಗೆ ವಿಜಯದಶಮಿ ಆಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಆರ್‌ಎಸ್‌ಎಸ್ ಮುಖ್ಯಸ್ಥ ಡಾ.ಮೋಹನ್ ಭಾಗವತ್ ವಾರ್ಷಿಕ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಸಂದರ್ಭದಲ್ಲಿ ಆರ್‌ಎಸ್‌ಎಸ್ ಮುಖ್ಯಸ್ಥರು ಶಸ್ತ್ರಪೂಜೆಯನ್ನು ನೆರವೇರಿಸಲಿದ್ದಾರೆ. ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಮತ್ತು ಕೇಂದ್ರ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಸೇರಿದಂತೆ ಇತರ ಗಣ್ಯರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

*********

ಕೇಂದ್ರದ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ಪ್ರಧಾನಮಂತ್ರಿ-ಸೂರ್ಯ ಘರ್: ಉಚಿತ ವಿದ್ಯುತ್ ಯೋಜನೆ ಅಡಿಯಲ್ಲಿ ಹೊಸ ಯೋಜನೆಗಳ ಅನುಷ್ಠಾನಕ್ಕಾಗಿ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ಮೇಲ್ಛಾವಣಿ ಸೌರ ತಂತ್ರಜ್ಞಾನಗಳು, ವ್ಯವಹಾರ ಮಾದರಿಗಳು ಮತ್ತು ಸಂಯೋಜಿಸುವ ತಂತ್ರಗಳಲ್ಲಿ ಪ್ರಗತಿಯನ್ನು ಉತ್ತೇಜಿಸಲು ೫೦೦ ಕೋಟಿ ರೂಪಾಯಿ ಮೊತ್ತವನ್ನು ಮೀಸಲಿಡಲಾಗಿದೆ. ಬ್ಲಾಕ್ ಚೇನ್ ತಂತ್ರಜ್ಞಾನ ಆಧಾರಿತ ಪೀರ್-ಟು-ಪೀರ್ ಸೋಲಾರ್ ಟ್ರೇಡಿಂಗ್, ಸ್ಮಾರ್ಟ್ ಮೆಟೀರಿಯಲ್ಸ್ ಮತ್ತು ಎಲೆಕ್ಟ್ರಿಕ್ ವಾಹನಗಳು ಮತ್ತು ಬ್ಯಾಟರಿ ಸಂಗ್ರಹಣೆಯೊಂದಿಗೆ ಸಂಯೋಜಿಸಲ್ಪಟ್ಟ ಮೇಲ್ಛಾವಣಿ ಸೌರಶಕ್ತಿಯಂತಹ ಮುಂಬರುವ ಪರಿಹಾರಗಳ ಮೇಲೆ ಕೇಂದ್ರೀಕರಿಸುವ ಮೂಲಕ ಹೊಸ ಪರಿಕಲ್ಪನೆಗಳ ಮಾರ್ಗದರ್ಶನ ಮಾಡುವಲ್ಲಿ ನವೋದ್ಯಮಗಳ ಸಂಸ್ಥೆಗಳು ಮತ್ತು ಕೈಗಾರಿಕೆಗಳನ್ನು ಗುರುತಿಸಲು ಮತ್ತು ಬೆಂಬಲಿಸಲು ಘಟಕ ಪ್ರಯತ್ನಿಸುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಸೋಲಾರ್ ಎನರ್ಜಿ ಅನುಷ್ಠಾನ ಸಂಸ್ಥೆಯಾಗಿ

ಕಾರ್ಯನಿರ್ವಹಿಸುತ್ತದೆ. ಆಯ್ದ ಯೋಜನೆಗಳ  ಯೋಜನಾ ವೆಚ್ಚದ ಶೇಕಡ ೬೦ರಷ್ಟು  ಅಥವಾ ೩೦ ಕೋಟಿ ರೂಪಾಯಿ ಪೈಕಿ ಯಾವುದು ಕಡಿಮೆಯೋ ಅದಕ್ಕೆ ತಕ್ಕಂತೆ ಹಣಕಾಸು ನೆರವು ದೊರೆಯಲಿದೆ.

*********

ಪ್ರಧಾನಿ ನರೇಂದ್ರ ಮೋದಿ ಎರಡು ದಿನಗಳ ಲಾವೋಸ್ ಪ್ರವಾಸ ಮುಗಿಸಿ ಸ್ವದೇಶಕ್ಕೆ ಹಿಂತಿರುಗಿದ್ದಾರೆ. ಲಾವೋಸ್‌ನ ವಿಯೆಂಟಿಯಾನ್‌ನಲ್ಲಿ ನಿನ್ನೆ ನಡೆದ ೧೯ನೇ ಪೂರ್ವ ಏಷ್ಯ ಶೃಂಗಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇಂಡೋ-ಫೆಸಿಫಿಕ್‌ನ ಇಡೀ ಪ್ರಾಂತ್ಯದಲ್ಲಿ ಶಾಂತಿ ಮತ್ತು ಪ್ರಗತಿಗೆ ಮುಕ್ತ, ಒಳಗೊಳ್ಳುವಿಕೆ, ಸಮೃದ್ಧತೆ ಮತ್ತು ನಿಯಮಗಳ ಆಧರಿತ ಕ್ರಮಗಳ ಅಗತ್ಯವಿದೆ. ಅಲ್ಲದೆ ದಕ್ಷಿಣ ಚೈನಾ ಸಮುದ್ರದಲ್ಲಿ ಶಾಂತಿ, ಭದ್ರತೆ ಮತ್ತು ಸ್ಥಿರತೆಯ ಅಗತ್ಯವಿದೆ. ವಿಶ್ವದ ವಿವಿಧೆಡೆ ನಡೆಯುತ್ತಿರುವ ಸಂಘರ್ಷಗಳಿಂದ ಜಾಗತಿಕ ದಕ್ಷಿಣದ ದೇಶಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರಲಿದೆ ಎಂದರು. ‘ಸೈಬರ್, ಸಾಗರ ವಲಯ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಸಹಕಾರ ಬಲಗೊಳಿಸುವ ಅಗತ್ಯವಿದೆ. ನೌಕಾಯಾನ ಮತ್ತು ವಾಯುಯಾನದಲ್ಲಿ ಸ್ವಾತಂತ್ರ ಅಗತ್ಯವಾಗಿದೆ. ಪಶ್ಚಿಮ ಏಷ್ಯಾ ಮತ್ತು ಯೂರೋಪ್ ಹೊಂದಿಕೊಂಡಿರುವ ಏಷ್ಯಾದಲ್ಲಿ ಶಾಂತಿ ಮತ್ತು ಸ್ಥಿರತೆ ನೆಲೆಸುವುದನ್ನು ಎಲ್ಲರೂ ಬಯಸುತ್ತಾರೆ. ಇದು ಯುದ್ಧದ ಕಾಲವಲ್ಲ. ಯುದ್ಧ ಭೂಮಿಯಿಂದ ಸಮಸ್ಯೆಗಳಿಗೆ ಪರಿಹಾರ ಸಿಗುವುದಿಲ್ಲ ಎಂದು ತಿಳಿಸಿದರು.

*********

ಇಂದು ವಿಶ್ವ ಸಂದಿವಾತ ದಿನವನ್ನು ಜಗತ್ತಿನಾದ್ಯಂತ ಆಚರಿಸಲಾಗುತ್ತಿದೆ. ರುಮಾಟಿಕ್ ಆರ್ಥರೈಟಿಸ್ ಮತ್ತು ಇದನ್ನು ತಡೆಗಟ್ಟುವಿಕೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ. ಮಾಹಿತಿಯುಕ್ತ ಆಯ್ಕೆಗಳು, ಉತ್ತಮ ಫಲಿತಾಂಶಗಳು ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ.  ಆಕಾಶವಾಣಿಯೊಂದಿಗೆ ಏಮ್ಸ್ ಸಂಸ್ಥೆಯ ಸಂಧಿವಾತ ವಿಭಾಗದ ಮುಖ್ಯಸ್ಥ ಡಾ.ಉಮಾ ಕುಮಾರ್, ಸಂಧಿವಾತವನ್ನು ಗುರುತಿಸುವ ಪ್ರಾಮುಖ್ಯತೆ ಜೊತೆಗೆ  ಸೂಕ್ತ ಚಿಕಿತ್ಸೆ ನೀಡುವುದು ಆದ್ಯತೆಯಾಗಿದೆ.  ಸಾಮಾಜಿಕ ಮಾಧ್ಯಮಗಳ ಮೂಲಕ ತಿಳಿದುಕೊಂಡು ಸ್ವಯಂ ಚಿಕಿತ್ಸೆ ಪಡೆದುಕೊಳ್ಳುವ ಪ್ರಯೋಗಗಳಿಗೆ ಮುಂದಾಗಬಾರದು ಎಂದು ರೋಗಿಗಳು ಮತ್ತು ಸಾರ್ವಜನಿಕರಿಗೆ ಸಲಹೆ ನೀಡಿದರು.     ಧೂಮಪಾನ, ಸ್ಥೂಲಕಾಯತೆ ಮತ್ತು ಚಿಕಿತ್ಸೆಗಾಗಿ ಬಹು ಆಯ್ಕೆಗಳಂತಹ ಅಪಾಯಕಾರಿ ಅಂಶಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಬೇಕು ಎಂದು ಹೇಳಿದರು.

*********

ಆದಾಯ ತೆರಿಗೆ ಇಲಾಖೆ ೨೦೨೪-೨೫ನೇ ಹಣಕಾಸು ವರ್ಷದಲ್ಲಿ ಇದುವರೆಗೆ ೧೩ ಲಕ್ಷ ೫೭ ಸಾವಿರ ಕೋಟಿ ರೂಪಾಯಿಗಳನ್ನು ನೇರ ತೆರಿಗೆ ರೂಪದಲ್ಲಿ ಸಂಗ್ರಹಿಸಿದೆ. ಇದರಲ್ಲಿ ಏಳು ಲಕ್ಷ ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತ ವೈಯಕ್ತಿಕ ಆದಾಯ ತೆರಿಗೆ ಮತ್ತು ಆರು ಲಕ್ಷ ಕೋಟಿ ರೂಪಾಯಿಗಳಿಗೂ ಅಧಿಕ ಸಾಂಸ್ಥಿಕ ವಲಯದ  ತೆರಿಗೆಗಳು ಸೇರಿವೆ. ಇಲಾಖೆ ಈವರೆಗೆ ಎರಡು ಲಕ್ಷದ

೩೧ ಸಾವಿರ ಕೋಟಿ ರೂಪಾಯಿಗಳನ್ನು ಮರುಪಾವತಿ ಮಾಡಿದೆ. ನಿವ್ವಳ ನೇರ ತೆರಿಗೆ ಸಂಗ್ರಹ ಶೇಕಡಾ ೧೮ ರಷ್ಟು ಗಮನಾರ್ಹ ಬೆಳವಣಿಗೆ ದಾಖಲಿಸಿದೆ.

*********

ಪರಸ್ಪರ ತಿಳಿವಳಿಕೆ ಮತ್ತು ಸಹಕಾರದಿಂದ ಭಾರತ-ಯುರೋಪ್ ವ್ಯಾಪಾರ ಮತ್ತಷ್ಟು ವೃದ್ಧಿಸಲಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ, ಭಾರತದಲ್ಲಿ ಐರೋಪ್ಯ ರಾಷ್ಟ್ರಗಳ ವ್ಯಾಪಾರ ಒಕ್ಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು, ಪ್ರಪಂಚದಲ್ಲಿ ಪ್ರತೀಕಾರದ ತತ್ವದ ಮೇಲೆ ಕೆಲಸ ಮಾಡಲು ಸಾಧ್ಯವಿಲ್ಲ, ಪರಸ್ಪರ ಸಹಕಾರದ ಮೂಲಕ ಪರಿಹಾರಗಳನ್ನು ಕಂಡುಕೊಳ್ಳಬೇಕಾದ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಐರೋಪ್ಯ ಒಕ್ಕೂಟದ ನೀತಿಗಳು ಮತ್ತು ಅರಣ್ಯನಾಶಕ್ಕೆ ಸಂಬಂಧಿಸಿದ ನಿಯಮಗಳು, ಇಂಗಾಲ ನಿಯಂತ್ರಣ ಮುಂತಾದ ಕ್ರಮಗಳು, ಭಾರತೀಯ ಉದ್ಯಮದ ಮೇಲೆ ಪ್ರಭಾವ ಬೀರಿವೆ ಎಂದು ಹೇಳಿದರು.

*********

ಮೈಸೂರು-ದರ್ಭಾಂಗ ಎಕ್ಸ್‌ಪ್ರೆಸ್ ರೈಲು ಚೆನ್ನೈ ವಿಭಾಗದ ಪೊನ್ನೇರಿ - ಕಾವೇರಿ ಪಟ್ಟೈ ರೈಲ್ವೆ ವಿಭಾಗದ ವ್ಯಾಪ್ತಿಯ ಗುಡ್ಡೂರು ಬಳಿ ಅಪಘಾತಕ್ಕೀಡಾಗಿದೆ ಎಂದು ನೈಋತ್ಯ ರೈಲ್ವೆ ತಿಳಿಸಿದೆ.

ಪೊನ್ನೇರಿ ರೈಲ್ವೆ ನಿಲ್ದಾಣದಿಂದ ಸಾಗಿ, ಕಾವೇರಿ ಪಟ್ಟೈ ಮಾರ್ಗದಲ್ಲಿ ರೈಲು ಸಂಚರಿಸುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ. ರೈಲಿಗೆ ಹಸಿರುನಿಶಾನೆ ದೊರೆತ ಕಾರಣ, ೭೫ ಕಿಲೋಮೀಟರ್ ವೇಗದಲ್ಲಿ ಸಾಗುತ್ತಿದ್ದ ರೈಲು, ನಿಂತಿದ್ದ ಸರಕು ಸಾಗಣೆ ರೈಲಿಗೆ ಡಿಕ್ಕಿ ಹೊಡೆದಿದೆ. ಇದರ ಪರಿಣಾಮ ರೈಲು ಇಂಜಿನ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ೧೨ ರಿಂದ ೧೩ ಕೋಚ್‌ಗಳು ಹಳಿತಪ್ಪಿವೆ. ಈವರೆಗೆ ಯಾವುದೇ ಸಾವು ಸಂಭವಿಸಿಲ್ಲ. ಗಾಯಗೊಂಡಿರುವ ಪ್ರಯಾಣಿಕರನ್ನು ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಿ, ಚಿಕಿತ್ಸೆ ನೀಡಲಾಗುತ್ತಿದೆ. ಈ ಮಾರ್ಗದ ಎಲ್ಲ ರೈಲುಗಳ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ಅಪಘಾತ ಸ್ಥಳಕ್ಕೆ ವೈದ್ಯಕೀಯ ಮತ್ತು ರಕ್ಷಣಾ ತಂಡಗಳು ಧಾವಿಸಿ, ಪರಿಹಾರ ಕಾರ್ಯದಲ್ಲಿ ನಿರತವಾಗಿವೆ. ಹೆಚ್ಚಿನ ಮಾಹಿತಿಗೆ ಮೈಸೂರು ರೈಲ್ವೆಯಲ್ಲಿ ಸಹಾಯವಾಣಿ ತೆರೆದಿದ್ದು, ಸಂಬಂಧಪಟ್ಟವರು ೦೮೨೧-೨೪೨೨೪೦೦ಗೆ ಕರೆ ಮಾಡಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

*********

ಭಾರತ- ಬಾಂಗ್ಲಾದೇಶಗಳ ನಡುವಣ ಮೂರನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯ, ಹೈದರಾಬಾದ್‌ನಲ್ಲಿಂದು ನಡೆಯಲಿದೆ. ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಪಂದ್ಯ ಆರಂಭವಾಗಲಿದೆ. ಮೂರು ಪಂದ್ಯಗಳ ಸರಣಿಯಲ್ಲಿ ೨-೦ ಮುನ್ನಡೆ ಸಾಧಿಸಿರುವ ಭಾರತ, ಈ ಪಂದ್ಯವನ್ನೂ ಗೆದ್ದು, ಬಾಂಗ್ಲಾ ತಂಡವನ್ನು ಕ್ಲೀನ್ ಸ್ವೀಪ್ ಮಾಡುವ ತವಕದಲ್ಲಿದೆ.

ದೆಹಲಿಯಲ್ಲಿ ನಡೆದ ಎರಡನೇ ಟಿ-೨೦ ಪಂದ್ಯದಲ್ಲಿ, ಬಾಂಗ್ಲಾದೇಶವನ್ನು ೮೬ ರನ್‌ಗಳಿಂದ ಮಣಿಸಿ, ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಇತಿಹಾಸದಲ್ಲಿ ಬಾಂಗ್ಲಾದೇಶದ ವಿರುದ್ಧ ಭಾರತಕ್ಕೆ ಅತಿ ದೊಡ್ಡ ಗೆಲುವನ್ನು ದಾಖಲಿಸಿತ್ತು. ಗ್ವಾಲಿಯರ್‌ನಲ್ಲಿ ನಡೆದ ಮೊದಲ ಪಂದ್ಯದಲ್ಲಿ ಭಾರತ ತಂಡ, ಏಳು ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತ್ತು.

********